


THE RURAL MIRROR Constructive Media www.theruralmirror.com

ಇ-ಪತ್ರಿಕೆ

18-07-2025

ದ ರೂರಲ್ ಮಿರರ್.ಕಾಂ

# ಕಳಪೆ ರಸಗೊಬ್ಬರ ಪೂರೈಕೆ ಮಾಡಿದರೆ ಕ್ರಮ



ನಕಲಿ ಮತ್ತು ಕಳಪೆ ಗುಣಮಟ್ಟದ ರಸಗೊಬ್ಬರಗಳ ಪೂರೈಕೆ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಕರ್ನಾಟಕ ಸೇರಿದಂತೆ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಕೇಂದ್ರ ಸರ್ಕಾರ ಕಟ್ಟುನಿಟ್ಟಿನ ನಿರ್ದೇಶನ ನೀಡಿದೆ. ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಈ ಕುರಿತು ಎಲ್ಲ ರಾಜ್ಯಗಳ ಮುಖ್ಯಮಂತ್ರಿಗಳಿಗೆ ಪತ್ರ ಬರೆದಿದ್ದು, ದೇಶಾದ್ಯಂತ ನಕಲಿ ರಸಗೊಬ್ಬರಗಳು ಮತ್ತು ಸಹಾಯಧನ ಹೊಂದಿರುವ ರಸಗೊಬ್ಬರಗಳನ್ನು ಕಾಳಸಂತೆಯಲ್ಲಿ ಮಾರಾಟ ಮಾಡುವುದನ್ನು ತಡೆಗಟ್ಟಲು ತಕ್ಷಣ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ್ದಾರೆ. ಪತ್ರದಲ್ಲಿ ರಸಗೊಬ್ಬರಗಳ ಮಾರಾಟ ಮಾಡುವವರ ಪರವಾನಗಿ ರದ್ದುಪಡಿಸುವುದು ಸೇರಿದಂತೆ, ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದ್ದಾರೆ. ಎಲ್ಲ ರಾಜ್ಯಗಳು ಈ ಕುರಿತಂತೆ ರಾಜ್ಯವ್ಯಾಪಿ ಅಭಿಯಾನ ಪ್ರಾರಂಭಿಸಬೇಕು. ಸಾಂಪ್ರದಾಯಿಕ ರಸಗೊಬ್ಬರಗಳಿಗೆ ನ್ಯಾನೊ ಅಥವಾ ಜೈವಿಕ ರಸಗೊಬ್ಬರಗಳ ಹೆಸರು ನೀಡುವ ಮೂಲಕ ರೈತರಿಗೆ ತಪ್ಪು ಮಾಹಿತಿ ನೀಡುವುದನ್ನು ತಡೆಗಟ್ಟಬೇಕು ಎಂದು ಸಚಿವರು ಸೂಚನೆ ನೀಡಿದ್ದಾರೆ.

## ಮುಳ್ಳಯ್ಯನಗಿರಿಗೆ ವಾಹನಗಳ ದಟ್ಟಣೆ ನಿಯಂತ್ರಿಸಲು ಕ್ರಮ



ಚಿಕ್ಕಮಗಳೂರು ಜಿಲ್ಲೆಯ ಮುಳ್ಳಯ್ಯನಗಿರಿ ಭಾಗದಲ್ಲಿ ವಾಹನಗಳ ದಟ್ಟಣೆ ನಿಯಂತ್ರಿಸಲು ಜಿಲ್ಲಾಡಳಿತ ವಾಹನಗಳಿಗೆ ಎರಡು ವಿಭಾಗಗಳಲ್ಲಿ ಅವಕಾಶ ಮಾಡಿಕೊಡಲು ನಿರ್ಧರಿಸಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಗಿರಿಮಾರ್ಗದಲ್ಲಿ ಕಳೆದ ಆರು ತಿಂಗಳಲ್ಲಿ ಎರಡೂವರೆ ಲಕ್ಷದಷ್ಟು ವಾಹನಗಳ ಸಂಚಾರ ಕಂಡುಬಂದಿದೆ. ಗಿರಿ ರಸ್ತೆ ಅತ್ಯಂತ ಕಿರಿದಾಗಿರುವುದರಿಂದ ಸಮಸ್ಯೆಯಾಗುತ್ತಿದ್ದು, ಭೂಗರ್ಭ ಶಾಸ್ತ್ರಜ್ಞರು ಭೂಕುಸಿತದ ಬಗ್ಗೆ ವರದಿ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಬೆಳಿಗ್ಗೆ6 ಗಂಟೆಯಿಂದ ಮಧ್ಯಾಹ್ನ 12 ರವರೆಗೆ 600 ವಾಹನಗಳನ್ನು ಹಾಗೂ ಮಧ್ಯಾಹ್ನ 1 ಗಂಟೆಯಿಂದ ಸಂಜೆ 6 ಗಂಟೆವರೆಗೆ 600 ವಾಹನಗಳನ್ನು ಬಿಡಲು ನಿರ್ಧರಿಸಲಾಗಿದೆ.

## ಮಾನಸಿಕ ಅಸ್ವಸ್ಥ ವ್ಯಕ್ತಿಗಳ ಆರೈಕೆಗೆ ಎನ್‌ಜಿಒಗಳಿಂದ ಅರ್ಜಿ ಆಹ್ವಾನ

ದಕ್ಷಿಣ ಕನ್ನಡ ಜಿಲ್ಲೆಯ ಜಿಲ್ಲಾ ಆಸ್ಪತ್ರೆಗಳಲ್ಲಿ ಮಾನಸಿಕ ಅಸ್ವಸ್ಥರಾಗಿರುವ ವ್ಯಕ್ತಿಗಳ ಆರೈಕೆಗಾಗಿ ತುರ್ತು ಆರೈಕೆ ಮತ್ತು ಚೇತರಿಕೆಗೆ ಕೇಂದ್ರಗಳನ್ನು ಸ್ಥಾಪಿಸಲು ಆಸಕ್ತಿಯುಳ್ಳ ಸರಕಾರೇತರ ಸಂಸ್ಥೆಗಳಿಂದ ಕರ್ನಾಟಕ ಪಬ್ಲಿಕ್ ಪ್ರೊಕ್ಯೂರ್ಮೆಂಟ್ ಪೋರ್ಟಲ್ ಮೂಲಕ ಆಸಕ್ತ ಅರ್ಜಿ ಆಹ್ವಾನಿಸಲಾಗಿದೆ. ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಸಲು ಜುಲೈ 24 ಕೊನೆಯ ದಿನ.

ಹೆಚ್ಚಿನ ಮಾಹಿತಿಗೆ ಕೆ.ಪಿ.ಪಿ.ಪಿ. ಪೋರ್ಟಲ್ ಮತ್ತು ದೂ.ಸಂ:-0824-2951381 ಸಂಪರ್ಕಿಸುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಹೆಚ್ಚಿನ ಓದಿಗೆ : www.theruralmirror.com**




